# <u>ಕರ್ನಾಟಕ ವಿಧಾನ ಪರಿಷತ್ತು</u>

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 2443 |
| ಸದಸ್ಯರ ಹೆಸರು | : | ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 27.03.2026. |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದ ಗ್ರಾಮ ಪಂಚಾಯಿತಿಗಳ ಹಣಕಾಸು ನಿರ್ವಹಣೆಗೆ ಆಧಾರವಾಗಿರುವ "ಕರ್ನಾಟಕ ಪಂಚಾಯತ್ ರಾಜ್ (ಆಯವ್ಯಯ ಮತ್ತು ಲೆಕ್ಕಪತ್ರ) ನಿಯಮಗಳು 2006" ಜಾರಿಗೆ ಬಂದು, 20 ವರ್ಷವಾಗಿದ್ದು, ಇಂದಿನ ಡಿಜಿಟಲ್ ಆಡಳಿತ, ಇ-ಗವರ್ನೆನ್ಸ್ ವ್ಯವಸ್ಥೆ, DBT, PFMS ಹಾಗೂ ಆನ್‌ಲೈನ್ ಲೆಕ್ಕಪತ್ರ ವ್ಯವಸ್ಥೆಗಳ ಹಿನ್ನೆಲೆಯಲ್ಲಿಯೇ ತಾಂತ್ರಿಕವಾಗಿ ಹಳೆದಾಗಿವೆ ಎಂಬುದನ್ನು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸರ್ಕಾರವು ಕಾಲಕಾಲಕ್ಕೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯಿತಿಗಳ ಆಯವ್ಯಯ ಮತ್ತು ಲೆಕ್ಕಪತ್ರಗಳು) ನಿಯಮಗಳು, 2006 ಕ್ಕೆ ತಿದ್ದುಪಡಿಗಳನ್ನು ತರಲಾಗಿರುತ್ತದೆ.<br><br>ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯಿತಿಗಳ ಆಯವ್ಯಯ ಮತ್ತು ಲೆಕ್ಕಪತ್ರಗಳು) ನಿಯಮಗಳು, 2006 ರ ಪೂರ್ಣ ತಿದ್ದುಪಡಿ ಸರ್ಕಾರದ ಪರಿಶೀಲನೆಯಲ್ಲಿರುತ್ತದೆ. |
| (ಆ) | 2006ರ ನಿಯಮಗಳಲ್ಲಿ ಇನ್ನೂ ಕೈಬರಹ ಆಧಾರಿತ ಹಳೆಯ ವಿಧಾನಗಳೇ ಚಾಲ್ತಿಯಲ್ಲಿದ್ದು, ಇಂದಿನ ಇ-ಗ್ರಾಮಸ್ವರಾಜ್, ಆನ್‌ಲೈನ್ ಲೆಕ್ಕಪತ್ರ ಸಂಯೋಜನೆ (IFMS), ಆಸ್ತಿ ನೋಂದಣಿ ಡಿಜಿಟಲೀಕರಣ ಮುಂತಾದ ವ್ಯವಸ್ಥೆಗಳೊಂದಿಗೆ ಪೂರ್ಣ ಸಂಯೋಜನೆ ಕಾಣಿಸಿಕೊಳ್ಳುತ್ತಿಲ್ಲವೆಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ; | |
| (ಇ) | 15ನೇ ಹಣಕಾಸು ಆಯೋಗ ಹಾಗೂ ಇತರೆ ಕೇಂದ್ರ ಅನುದಾನಗಳ ಹಿನ್ನೆಲೆಯಲ್ಲಿ ಪಾರದರ್ಶಕತೆ, Performance Audit, Social Audit, Internal Audit, ಹಾಗೂ Real-time Expenditure Monitering ವ್ಯವಸ್ಥೆಗಳನ್ನು ಕಡ್ಡಾಯಗೊಳಿಸುವಂತೆ ನಿಯಮಗಳಲ್ಲಿ ತಿದ್ದುಪಡಿ ಮಾಡುವ ಬಗ್ಗೆ ಪ್ರಸ್ತಾವನೆ ಇದೆಯೇ; | ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯಿತಿಗಳ ಆಯವ್ಯಯ ಮತ್ತು ಲೆಕ್ಕಪರಿಶೋಧನೆ) ನಿಯಮಗಳು, 2006 ರಲ್ಲಿ ಸ್ಥಳೀಯ ಲೆಕ್ಕಪರಿಶೋಧನಾ ವರ್ತುಲದಿಂದ ನಡೆಸಲಾಗುವ ಶಾಸನಬದ್ಧ ಲೆಕ್ಕಪರಿಶೋಧನೆ ಬಗ್ಗೆ ತಿಳಿಸಲಾಗಿರುತ್ತದೆ.<br><br>15 ನೇ ಹಣಕಾಸು ಆಯೋಗ ಹಾಗೂ ಇತರೆ ಕೇಂದ್ರ ಅನುದಾನಗಳ ಹಿನ್ನಲೆಯಲ್ಲಿ ಪಾರದರ್ಶಕತೆ, Performance Audit, Internal Audit ಗಳ ಬಗ್ಗೆ CAG ಯಿಂದ ಕ್ರಮ ವಹಿಸಲಾಗುತ್ತದೆ. |

| | | |
|---|---|---|
| | | Performance Audit, Social Audit, Internal Audit ಗಳ ಬಗ್ಗೆ ನಿಯಮಗಳ ಸಮಗ್ರ ಪರಿಷ್ಕರಣೆ ಚರ್ಚೆಯಲ್ಲಿರುತ್ತದೆ. |
| (ಈ) | ಪ್ರಸ್ತುತ ನಿಯಮಗಳಲ್ಲಿ ಗ್ರಾಮ ಪಂಚಾಯಿತಿಗಳ ಸ್ವಂತ ಆದಾಯ, ತೆರಿಗೆ ಸಂಗ್ರಹಣೆ, ಬಳಕೆದಾರರ ಶುಲ್ಕ, ಆಸ್ತಿ ತೆರಿಗೆ ಮೌಲ್ಯಮಾಪನ, ಡಿಜಿಟಲ್ ಪಾವತಿ ವ್ಯವಸ್ಥೆ ಕುರಿತು ಸ್ಪಷ್ಟ ಮಾರ್ಗಸೂಚಿಗಳು ಇಲ್ಲದಿರುವುದರಿಂದ ಆದಾಯ ಸೋರಿಕೆ ಹಾಗೂ ಲೆಕ್ಕಪತ್ರ ನಿರ್ವಹಣಾ ಸಮಸ್ಯೆ ಉಂಟಾಗುತ್ತಿರುವ ಬಗ್ಗೆ ಸರ್ಕಾರ ಪರಿಶೀಲನೆ ನಡೆಸಿದೆಯೇ; | ಗ್ರಾಮ ಪಂಚಾಯಿತಿಗಳ ಸ್ವಂತ ಆದಾಯ, ತೆರಿಗೆ ಸಂಗ್ರಹಣೆ, ಆಸ್ತಿ ತೆರಿಗೆ ಮೌಲ್ಯಮಾಪನ, ಡಿಜಿಟಲ್ ಪಾವತಿ ವ್ಯವಸ್ಥೆಗಳ ಬಗ್ಗೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯಿತಿಗಳ ತೆರಿಗೆ, ದರ ಮತ್ತು ಶುಲ್ಕಗಳು) ನಿಯಮಗಳು, 2025 ರಲ್ಲಿ ತಿಳಿಸಲಾಗಿರುತ್ತದೆ.<br><br>ತೆರಿಗೆ ನಿರ್ಧರಣೆ ಹಾಗೂ ಸಂಗ್ರಹಣೆಗೆ ಸಂಬಂಧಿಸಿದಂತೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯಿತಿಗಳ ಆಯವ್ಯಯ ಮತ್ತು ಲೆಕ್ಕಪತ್ರಗಳು) (ತಿದ್ದುಪಡಿ) ನಿಯಮಗಳು, 2025 ರಲ್ಲಿ ಅಧಿಸೂಚಿಸಲಾಗಿರುತ್ತದೆ.<br><br>ತೆರಿಗೆ ನಿರ್ಧರಣೆ, ಸಂಗ್ರಹಣೆಗೆ ಸಂಬಂಧಿಸಿದಂತೆ ಪಂಚತಂತ್ರ 2.0 ತಂತ್ರಾಂಶದ ಮೂಲಕ ನಿರ್ವಹಿಸಲಾಗುತ್ತಿರುತ್ತದೆ. |
| (ಉ) | 2006ರ ನಿಯಮಗಳನ್ನು ಸಮಗ್ರವಾಗಿ ಪರಿಷ್ಕರಿಸಿ, ಇಂದಿನ ಹಣಕಾಸು ಶಿಸ್ತಿನ ಮಾನದಂಡಗಳು, ಸಾರ್ವಜನಿಕ ಹಣಕಾಸು ನಿರ್ವಹಣಾ ವ್ಯವಸ್ಥೆ (PFMA Reforms), ಹಾಗೂ CAG ಸೂಚನೆಗಳಿಗೆ ಅನುಗುಣವಾಗಿ ತಾಂತ್ರಿಕ, ಡಿಜಿಟಲ್ ಹಾಗೂ ಪಾದರ್ಶಕವಾಗಿ ಹೊಸ ಲೆಕ್ಕ ಪತ್ರ ನಿಯಮವನ್ನು ರೂಪಿಸುವ ಬಗ್ಗೆ ಕಾರ್ಯಯೋಜನೆ ರೂಪಿಸುವುದೇ? | ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯಿತಿಗಳ ಆಯವ್ಯಯ ಮತ್ತು ಲೆಕ್ಕಪತ್ರಗಳು) ನಿಯಮಗಳು, 2006ರ ಸಮಗ್ರ ಪರಿಷ್ಕರಣೆ ಪರಿಶೀಲನೆಯಲ್ಲಿರುತ್ತದೆ. |

**ಸಂಖ್ಯೆ:** ಗ್ರಾಅಪ 344 ಗ್ರಾಪಂಅ 2026

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.